# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2016–17ನೇ ಸಾಲಿನಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಯವರ ಆಯವ್ಯಯ ಭಾಷಣದ ಘೋಷಣೆ– ಧನಶ್ರೀ ಯೋಜನೆ ಅನುಷ್ಠಾನ ಕುರಿತು.

ಓದಲಾಗಿದೆ:

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಇವರ ಏಕ ಕಡತ ಸಂಖ್ಯೆ: ಮಅನಿ:ಹೊಯೋ/ಧನಶ್ರೀ/01/2016–17.

ಪ್ರಸ್ತಾವನೆ:

ಹೆಚ್.ಐ.ವಿ. ಸೋಂಕಿತ ಸಂತ್ರಸ್ಥೆಯರು ಸುಮಾರು 2,50,000 ಇರುವುದಾಗಿ ಅಂದಾಜಿಸಲಾಗಿದೆ. ಇಂತಹ ಮಹಿಳೆಯರು ಹಾಗೂ ಹೆಚ್.ಐ.ವಿ. ಬಾಧಿತ ಕುಟುಂಬಸ್ಥರು ಸಮಾಜದಲ್ಲಿ ಅನೇಕ ಸಮಸ್ಯೆಗಳಿಗೆ ತುತ್ತಾಗುತ್ತಾರೆ. ಅಲ್ಲದೆ, ಅವರುಗಳು ಅನುಭವಿಸುತ್ತಿರುವ ಸ್ಥಿತಿಗತಿಗಳಿಂದಾಗಿ ಸಮಾಜದಲ್ಲಿ ಮುಂದೆ ಬರಲು ಸಾಧ್ಯವಾಗದೆ ಅವಕಾಶಗಳಿಂದ ವಂಚಿತರಾಗುತ್ತಾರೆ. ಈ ಪರಿಣಾಮವಾಗಿ ಅವರು ಆರ್ಥಿಕ ಮತ್ತು ಸಾಮಾಜಿಕವಾಗಿ ಹಿಂದುಳಿದಿರುತ್ತಾರೆ. ಈ ರೀತಿ ಸಂಕಷ್ಟಕ್ಕೊಳಗಾದ ಮಹಿಳೆಯರನ್ನು ಸಮಾಜದ ಮುಖ್ಯ ವಾಹಿನಿಗೆ ತರುವುದು ಅಗತ್ಯವಿರುತ್ತದೆ.

ಕರ್ನಾಟಕ ರಾಜ್ಯದಲ್ಲಿ ವಾಸಿಸುತ್ತಿರುವ 18 ರಿಂದ 60 ವರ್ಷ ವಯೋಮಿತಿಯ ಅತಿ ಸಂಕಷ್ಟಕ್ಕೊಳಗಾದ ಮತ್ತು ಬಾಧಿತ ಮಹಿಳೆಯರಿಗೆ ಹಾಗೂ ಅವರ ಕುಟುಂಬದ ಸದಸ್ಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಹಾಗೂ ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಪ್ರೇರೇಪಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. 2016–17ನೇ ಸಾಲಿನ ಆಯ–ವ್ಯಯ ಘೋಷಣೆ ಮೇರೆಗೆ ಧನಶ್ರೀ ಯೋಜನೆಯಡಿ ಪ್ರತಿ ಫಲಾನುಭವಿಗೆ ರೂ.40,000/–ಗಳ ನೇರ ಸಾಲವನ್ನು ಶೇಕಡ 4ರ ಬಡ್ಡಿ ದರದಲ್ಲಿ ಒದಗಿಸಿ ರೂ.10,000/– ಗಳನ್ನು ಸಹಾಯಧನವಾಗಿ ನೀಡಲು ಒಟ್ಟು 1000 ಫಲಾನುಭವಿಗಳಿಗೆ ರೂ.500.00 ಲಕ್ಷಗಳನ್ನು ಹಾಗೂ ಈ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ನೀಡಲು ಮೇಲೆ ಕ್ರಮ ಸಂಖ್ಯೆ:1ರಲ್ಲಿ ಓದಲಾದ ಏಕ ಕಡತದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಇವರು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಮಮಇ 18 ಮಅನಿ 2016, ಬೆಂಗಳೂರು, ದಿನಾಂಕ: 22.06.2016.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, 2016–17ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ "ಧನಶ್ರೀ" ಯೋಜನೆಯನ್ನು ಅನುಷ್ಠಾನಗೊಳಿಸಲು ತಾತ್ವಿಕ ಆಡಳಿತಾತ್ಮಕ ಮಂಜೂರಾತಿ ನೀಡಿದೆ. ಕರ್ನಾಟಕ ರಾಜ್ಯದದಲ್ಲಿ ವಾಸಿಸುತ್ತಿರುವ 18ರಿಂದ 60 ವರ್ಷ ವಯೋಮಿತಿಯ ಅತೀ ಸಂಕಷ್ಟಗೊಳಗಾದ ಮತ್ತು ಹೆಚ್.ಐ.ವಿ ಸೋಂಕಿತ ಸಂತ್ರಸ್ಥೆಯರಿಗೆ ಪ್ರತಿ ಫಲಾನುಭವಿಗೆ ರೂ.40.000/–ಗಳ ಸಾಲವಾಗಿ ಹಾಗೂ ರೂ.10.000/– ಸಹಾಯಧನ ನೀಡಲು ಹಾಗೂ ಹೆಚ್.ಐ.ವಿ ಸೋಂಕಿತ ಮಹಿಳೆಯರ ಗೌಪ್ಯತೆಗೆ ಭಂಗವನ್ನುಂಟುಮಾಡದೆ ಇದರೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿನ ಮಾರ್ಗಸೂಚಿಗಳೊಳಪಟ್ಟಿರುತ್ತದೆ.

–2

ಈ ಯೋಜನೆಯನ್ನು ಪೂರಕ ಅಂದಾಜು-1ರಲ್ಲಿ ಒದಗಿಸಲಾಗುವ ಅನುದಾನದ ಮಿತಿಯೊಳಗೆ ಭರಿಸುವ ಷರತ್ತಿಗೊಳಪಟ್ಟಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 121 ವೆಚ್ಚ-10/2016, ದಿನಾಂಕ:04.5.2016ರ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 43 ಐಎಂಎಂ 2016, ದಿನಾಂಕ:28.5.2016ಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

22/6/2016
(ಜಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್‌ಎಸ್‌ಎ/ ಇಆರ್‌ಎಸ್‌ಎ ಮತ್ತು ಎ & ಇ)ಅಂಚೆ ಪೆಟ್ಟಿಗೆ ಸಂಖ್ಯೆ:5398, ಕರ್ನಾಟಕ, ಬೆಂಗಳೂರು – 560 001.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಬೆಂಗಳೂರು.
4. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಜಂಟಿ ನಿರ್ದೇಶಕರು/ಉಪನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು.
7. ಉಪನಿರ್ದೇಶಕರು, ಎನ್.ಎಂ.ಸಿ. ಖನಿಜ ಭವನ ಬೆಂಗಳೂರು
8. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
9. ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3)
11. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಶಾಖಾಧಿಕಾರಿ, ಸ್ತ್ರೀಮರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
14. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
15. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
16. ಶಾಖಾ ರಕ್ಷಾ ಕಡತ/ODGC/ಹೆಚ್ಚುವರಿ ಪ್ರತಿ.